**All India Radio: Bangalore**
**National Bulletin In Kannada**
**31.03.2026  13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**31.03.2026  13.10 hrs**

**<>><><*><><<>**

ಮುಖ್ಯಾಂಶಗಳು

**೧. ಗುಜರಾತ್‌ನ ಗಾಂಧೀನಗರದಲ್ಲಿ ಸಾಮ್ರಾಟ್ ಸಂಪ್ರತಿ ವಸ್ತುಸಂಗ್ರಹಾಲಯ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ**

**೨. ಜನಗಣತಿ-೨೦೨೭ ; ೩೨ ಪ್ರಶ್ನೆಗಳ ಪಟ್ಟಿ ಪ್ರಕಟಿಸಿದ ಕೇಂದ್ರ ಸರ್ಕಾರ, ನಾಳೆಯಿಂದ ಮೊದಲ ಹಂತದ ಜನಗಣತಿ ಆರಂಭ**

**೩. ಬಿಹಾರದ ಮಾತಾ ಶೀತ್ಲಾ ದೇವಿ ದೇಗುಲದಲ್ಲಿ ಕಾಲ್ತುಳಿತ ; ೭ ಮಂದಿ ಭಕ್ತರು ಸಾವು, ಒಬ್ಬರ ಸ್ಥಿತಿ ಗಂಭೀರ**

**೪. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದಿನ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ -ಗುಜಾರಾತ್ ಟೈಟಾನ್ಸ್ ಮುಖಾಮುಖಿ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ಗೆ ಒಂದು ದಿನದ ಭೇಟಿಯಲಿದ್ದಾರೆ. ಗಾಂಧಿನಗರದ ಕೋಬಾದಲ್ಲಿ ಸಾಮ್ರಾಟ್ ಸಂಪ್ರತಿ ವಸ್ತುಸಂಗ್ರಹಾಲಯವನ್ನು ಅವರು ಉದ್ಘಾಟಿಸಿದರು. ಈ ವಸ್ತು ಸಂಗ್ರಾಲಯವು ಜೈನ ಇತಿಹಾಸ ಮತ್ತು ಸಾಮ್ರಾಟ್ ಸಂಪ್ರತಿಯ ಜೀವನ, ಅವರ ಆಳ್ವಿಕೆ ಮತ್ತು ಅಹಿಂಸೆಯ ಸಂದೇಶಕ್ಕೆ ಸಮರ್ಪಿತವಾಗಿವೆ. ಬಳಿಕ ಪ್ರಧಾನಿಯವರು ಅಹಮದಾಬಾದ್‌ನ ಸನಂದ್‌ನಲ್ಲಿರುವ ಕೇನ್ಸ್ ಸೆಮಿಕಾನ್ ಸ್ಥಾವರವನ್ನು ಉದ್ಘಾಟಿಸಲಿದ್ದಾರೆ ಮತ್ತು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ನಂತರ, ಅವರು ವಾವ್-ಥರಾದ್‌ಗೆ ಪ್ರಯಾಣಿಸಲಿದ್ದಾರೆ. ಅಲ್ಲಿ ಅವರು ಸುಮಾರು ೨೦ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಅಡಿಪಾಯ ಹಾಕಲಿದ್ದಾರೆ ಮತ್ತು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ.

**<>><><*><><<>**

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಎರಡು ದಿನಗಳ ಕಾಲ ಬಿಹಾರ ಮತ್ತು ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ. ಅವರು ಇಂದು ಬಿಹಾರದ ರಾಜಗೀರ್‌ನಲ್ಲಿರುವ ನಳಂದ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ನಾಳೆ ಕರ್ನಾಟಕದ ತುಮಕೂರಿನ ಶ್ರೀ ಸಿದ್ದಗಂಗಾ ಮಠದಲ್ಲಿ ಶ್ರೀ ಶಿವಕುಮಾರ ಸ್ವಾಮೀಜಿ ಅವರ ೧೧೯ನೇ ಜನ್ಮದಿನಾಚರಣೆ ಮತ್ತು ಗುರುವಂದನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಇಂದು ಲೋಕಭವನದಲ್ಲಿ ತಂಗಲಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ. ಮುನ್ನೆಚ್ಚರಿಕಾ ಕ್ರಮವಾಗಿ ತುಮಕೂರಿನಲ್ಲಿ ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ.

**<>><><*><><<>**

೨೦೨೭ರ ಜನಗಣತಿಯ ಮೊದಲ ಹಂತದಲ್ಲಿ ಕೇಳಬೇಕಾದ ೩೨ ಪ್ರಶ್ನೆಗಳ ಪಟ್ಟಿಯನ್ನು ಸರ್ಕಾರ ಪ್ರಕಟಿಸಿದೆ. ಈ ಕುರಿತು ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಭಾರತದ ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತ ಮೃತ್ಯುಂಜಯ್ ಕುಮಾರ್ ನಾರಾಯಣ್, ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗುವುದು. ರಾಜ್ಯಗಳ ಮತ್ತು ಕೇಂದ್ರಾಡಳಿತ ಪ್ರದೇಶಗಳು ಅಂತಿಮಗೊಳಿಸಿದ ವೇಳಾಪಟ್ಟಿಗಳ ಪ್ರಕಾರ, ಏಪ್ರಿಲ್ ೧ ರಿಂದ ಸೆಪ್ಟೆಂಬರ್ ೩೦ ನಡುವೆ ಮೊದಲ ಹಂತದಲ್ಲಿ ಮನೆಪಟ್ಟಿ ಮತ್ತು ಸ್ವಯಂ ಗಣತಿಯನ್ನು ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು. ಸ್ವಯಂ ಗಣತಿ ಪೋರ್ಟಲ್ ಒಟ್ಟು ೧೬ ಭಾಷೆಗಳಲ್ಲಿ ಲಭ್ಯವಿರುತ್ತದೆ ಎಂದು ಅವರು ತಿಳಿಸಿದರು.

<>><><*><><<>

ತೆಲಂಗಾಣ, ರಾಜಸ್ಥಾನ, ಮಹಾರಾಷ್ಟ್ರ, ಉತ್ತರಾಖಂಡ್, ಮಿಜೋರಾಂನಲ್ಲಿನ ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಸ್ಥಳೀಯ ಸಂಸ್ಥೆಗಳಿಗೆ ೨೦೨೫-೨೬ರ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರ ೧೫ನೇ ಹಣಕಾಸು ಆಯೋಗದ ಅನುದಾನಗಳನ್ನು ಬಿಡುಗಡೆ ಮಾಡಿದೆ. ಈ ಅನುದಾನಗಳು ತಳಮಟ್ಟದ ಆಡಳಿತವನ್ನು ಸಬಲೀಕರಣಗೊಳಿಸುತ್ತದೆ. ಪಂಚಾಯತ್‌ರಾಜ್ ಸಂಸ್ಥೆಗಳಲ್ಲಿ ಅಗತ್ಯ ಆಧಾರಿತ ಸ್ಥಳೀಯ ಅಭಿವೃದ್ಧಿಯನ್ನು ಸಕ್ರಿಯಗೊಳಿಸುತ್ತದೆ. ತೆಲಂಗಾಣದ ೧೨ ಸಾವಿರದ ೬೦೦ ಗ್ರಾಮ ಪಂಚಾಯತಿಗಳಿಗೆ ಮೊದಲನೇ ಕಂತಿನಲ್ಲಿ ೨೪೭ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ. ಉತ್ತರಾಖಂಡಕ್ಕೆ ೨ನೇ ಕಂತಿನಲ್ಲಿ ೯೧ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ. ಮಹಾರಾಷ್ಟ್ರಕ್ಕೆ ೧ ಮತ್ತು ೨ ಕಂತಾಗಿ ತಲಾ ೧೦೯ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಾಗಿದೆ. ೨ನೇ ಕಂತಿನಲ್ಲಿ ೨೭ ಕೋಟಿ ರೂಪಾಯಿಗಳ ಅನುದಾನವನ್ನು ಮೇಘಾಲಯ ಪಡೆದಿದೆ.

<>><><*><><<>

ಆದಾಯ ತೆರಿಗೆ ಕಾಯ್ದೆ-೨೦೨೫, ನಾಳೆಯಿಂದ ಜಾರಿಗೆ ಬರಲಿದೆ. ಸರಳೀಕೃತ ಆದಾಯ ತೆರಿಗೆ ನಿಯಮಗಳು ಮತ್ತು ನಮೂನೆಗಳನ್ನು ಆದಾಯ ತೆರಿಗೆ ಇಲಾಖೆ ಪ್ರಕಟಿಸಿದೆ. ಇದರಿಂದಾಗಿ ತೆರಿಗೆದಾರರು ಅವಶ್ಯಕತೆಗಳಿಗೆ ಅನುಗುಣವಾಗಿ  ತಮ್ಮನ್ನು ತಾವು ಸಿದ್ಧಪಡಿಸಿಕೊಳ್ಳಲು ಸಾಕಷ್ಟು ಸಮಯ ಸಿಗುತ್ತದೆ. ಸಾಮಾನ್ಯ ನಾಗರಿಕರಿಗೆ ಸರಳವಾದ ತಿಳುವಳಿಕೆ ಮತ್ತು ಅನುಸರಣೆಗಾಗಿ ನಮೂನೆಗಳನ್ನು ಮರುವಿನ್ಯಾಸಗೊಳಿಸಲಾಗಿದೆ. ಪ್ರಮುಖವಾಗಿ ಸ್ಕ್ರ್ಯಾಪ್ ಮತ್ತು ಖನಿಜಗಳ ಟಿಸಿಎಸ್ ದರವನ್ನು ೨ಕ್ಕೆ ತರ್ಕಬದ್ಧಗೊಳಿಸಲಾಗಿದೆ. ಉದಾರೀಕೃತ ರೆಮಿಟೆನ್ಸ್ ಯೋಜನೆಯಡಿಯಲ್ಲಿ ಟಿಸಿಎಸ್, ಶಿಕ್ಷಣ ಮತ್ತು ವೈದ್ಯಕೀಯ ಚಿಕಿತ್ಸೆಗಾಗಿ ರೆಮಿಟೆನ್ಸ್ ಟಿಸಿಎಸ್ ಶೇಕಡ ೫ ರಿಂದ ಶೇಕಡ ೨ಕ್ಕೆ ಇಳಿಸಲಾಗಿದೆ. ಎಲ್ಲಾ ರೀತಿಯ ಷೇರುದಾರರಿಗೆ ಬಂಡವಾಳ ಲಾಭವಾಗಿ ಷೇರುಗಳ ಮರುಖರೀದಿಯ ಮೇಲೆ ತೆರಿಗೆ ವಿಧಿಸಲಾಗುತ್ತದೆ.

<>><><*><><<>

೨೪ನೇ ಜೈನ ತೀರ್ಥಂಕರರಾದ ಭಗವಾನ್ ಮಹಾವೀರರ ಜನ್ಮ ದಿನಾಚರಣೆಯಾದ ಮಹಾವೀರ ಜಯಂತಿಯನ್ನು ಇಂದು ದೇಶಾದ್ಯಂತ ಆಚರಿಸಲಾಗುತ್ತಿದೆ. ಮಹಾವೀರ್ ಜಯಂತಿಯು ಜೈನ ಸಮುದಾಯಕ್ಕೆ ಅತ್ಯಂತ ಪವಿತ್ರ ದಿನವೆಂದು ಪರಿಗಣಿಸಲಾಗಿದೆ ಮತ್ತು ಅವರ ಧಾರ್ಮಿಕ ಜೀವನದಲ್ಲಿ ಹೆಚ್ಚಿನ ಪ್ರಾಮುಖ್ಯತೆ ಹೊಂದಿದೆ. ದೇಶವಾಸಿಗಳಿಗೆ ವಿಶೇಷವಾಗಿ ಜೈನ ಸಮುದಾಯದವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಮಂತ್ರಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ಮಹಾವೀರ್ ಜಯಂತಿಯ ಶುಭಾಶಯ ಕೋರಿದ್ದಾರೆ.

<>><><*><><<>

ಬಿಹಾರದ ನಳಂದದಲ್ಲಿರುವ ಮಾತಾ ಶೀತ್ಲಾ ದೇವಿ ದೇಗುಲದಲ್ಲಿ ಪ್ರಾರ್ಥನೆ ವೇಳೆ ಇಂದು ಸಂಭವಿಸಿದ ಕಾಲ್ತುಳಿತದಲ್ಲಿ ೭ ಮಂದಿ ಭಕ್ತರು ಸಾವನಪ್ಪಿದ್ದು, ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಪೊಲೀಸರು ದೃಢಪಡಿಸಿದ್ದಾರೆ. ದೀಪ್‌ನಗರ ಪೊಲೀಸ್ ಠಾಣೆ ಪ್ರದೇಶದಲ್ಲಿರುವ ದೇವಸ್ಥಾನದಲ್ಲಿ ಈ ಘಟನೆ ಸಂಭವಿಸಿದೆ. ರಕ್ಷಣಾ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿದ್ದು, ಪರಿಹಾರ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಗಾಯಾಳುಗಳನ್ನು ಚಿಕಿತ್ಸೆಗಾಗಿ ಸಮೀಪದ ಆಸ್ಪತ್ರೆಗಳಿಗೆ ರವಾನಿಸಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಬಿಹಾರ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

<>><><*><><<>

ದುಬೈ ಕರಾವಳಿಯಲ್ಲಿ ಒಂದು ದೊಡ್ಡ ತೈಲ ಟ್ಯಾಂಕರ್ ಮೇಲೆ ಇರಾನ್ ಡ್ರೋನ್ ದಾಳಿ ನಡೆಸಿದೆ. ಇದು ವ್ಯಾಪಕ ಸಂಘರ್ಷ ಮತ್ತು ಜಾಗತಿಕ ಇಂಧನ ಪೂರೈಕೆಗೆ ಅಡ್ಡಿಯಾಗುವ ಭೀತಿಯನ್ನು ಹೆಚ್ಚಿಸಿದೆ. ಎರಡು ದಶಲಕ್ಷ ಬ್ಯಾರಲ್‌ಗಳಷ್ಟು ಕಚ್ಚಾತೈಲ ಹೊತ್ತೊಯ್ಯುತ್ತಿದ್ದ ಕುವೈತ್ ಧ್ವಜ ಹೊತ್ತ ಟ್ಯಾಂಕರ್ ದಾಳಿಗೆ ತುತ್ತಾಗಿ ಬೆಂಕಿಗೆ ಆಹುತಿಯಾಯಿತು. ಪ್ರಸ್ತುತ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ. ಅಲ್ಲದೇ ಟ್ಯಾಂಕರ್‌ನಲ್ಲಿದ್ದ ಎಲ್ಲ ೨೪ ಸಿಬ್ಬಂದಿ ಸುರಕ್ಷಿತವಾಗಿದ್ದಾರೆ ಎಂದು ದುಬೈ ಅಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕ ಮತ್ತು ಇಸ್ರೇಲ್ ಹಾಗೂ ಇರಾನ್ ನಡುವೆ ಸಂಘರ್ಷ ಹೆಚ್ಚುತ್ತಿರುವ ನಡುವೆ ಈ ಘಟನೆ ನಡೆದಿದೆ.

<>><><*><><<>

ಯುದ್ಧವನ್ನು ಶೀಘ್ರದಲ್ಲೇ ಕೊನೆಗೊಳಿಸುವ ಒಪ್ಪಂದಕ್ಕೆ ಬರದಿದ್ದರೆ, ಇರಾನ್‌ನ ಇಂಧನ ಸಂಪನ್ಮೂಲಗಳು ಮತ್ತು ನೀರಿನ ಸಂಸ್ಕರಣಾ ಘಟಕಗಳು ಸೇರಿದಂತೆ ಇತರ ಪ್ರಮುಖ ಮೂಲಸೌಕರ್ಯಗಳನ್ನು ನಾಶಪಡಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಹಾಕಿದ್ದಾರೆ. ಸುದ್ದಿ ವಾಹಿನಿಯೊಂದಕ್ಕೆ ನೀಡಿದ ಸಂದರ್ಶನದಲ್ಲಿ ಅವರು, ಅಮೆರಿಕ ಪಡೆಗಳು ಇರಾನ್‌ನ ಖಾರ್ಗ್ ದ್ವೀಪದ ತೈಲ ರಫ್ತು ಕೇಂದ್ರವನ್ನು ವಶಪಡಿಸಿಕೊಳ್ಳಬಹುದು ಎಂದು ಹೇಳಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಇರಾನ್, ತನ್ನ ಪ್ರದೇಶವನ್ನು ಆಕ್ರಮಿಸಿದರೆ, ಪರ್ಷಿಯನ್ ಕೊಲ್ಲಿಯನ್ನು ನಾಶಪಡಿಸುವುದಾಗಿ ಬೆದರಿಕೆ ಹಾಕಿದೆ. ಕುವೈತ್‌ನಲ್ಲಿ ಪ್ರಮುಖ ನೀರು ಮತ್ತು ವಿದ್ಯುತ್ ಸ್ಥಾವರವನ್ನು ಹಾಗೂ ಇಸ್ರೇಲ್‌ನ ತೈಲ ಸಂಸ್ಕರಣಾಗಾರವನ್ನು ಇರಾನ್ ನಿನ್ನೆ ನಾಶಪಡಿಸಿದೆ. ಇದಕ್ಕೆ ಪ್ರತಿಯಾಗಿ ಅಮೆರಿಕ ಮತ್ತು ಇಸ್ರೇಲ್ ಕೂಡ ಇರಾನ್ ವಿರುದ್ಧ ತಮ್ಮ ದಾಳಿಗಳನ್ನು ಮುಂದುವರಿಸಿವೆ.

<>><><*><><<>

ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ವಿಕ್ರಮ ಮಿಸ್ರಿ ಅವರು ನವದೆಹಲಿಯಲ್ಲಿ ರಷ್ಯಾದ ಉಪ ವಿದೇಶಾಂಗ ಸಚಿವ ಆಂಡ್ರೆ ರುಡೆಂಕೊ ಅವರೊಂದಿಗೆ ಉಭಯ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳ ಕುರಿತು ಸಮಾಲೋಚನೆ ನಡೆಸಿದರು. ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳ ಸಂಪೂರ್ಣ ವ್ಯಾಪ್ತಿಯನ್ನು ಪರಿಶೀಲಿಸಿದರು. ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ತಮ್ಮ ದೃಷ್ಟಿಕೋನಗಳನ್ನು ಹಂಚಿಕೊಂಡರು. ಕಳೆದ ವರ್ಷ ಡಿಸೆಂಬರ್‌ನಲ್ಲಿ ನವದೆಹಲಿಯಲ್ಲಿ ನಡೆದ ೨೩ನೇ ವಾರ್ಷಿಕ ಶೃಂಗಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳ ಅನುಷ್ಠಾನದ ಕುರಿತು ಎರಡೂ ಕಡೆಯವರು ಪ್ರಗತಿಯನ್ನು ಪರಿಶೀಲಿಸಿದರು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<>><><*><><<>

ಚಂಡೀಗಢದ ಮಹಾರಾಜ ಯದವಿಂದ್ರ ಸಿಂಗ್ ಅಂತಾರಾಷ್ಟ್ರೀಯ  ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಗುಜಾರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಗುವಾಹಟಿಯ ಬರ್ಸಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡ ಎಂಟು ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿತು.

**<>><><*><><<>**

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದ ಏಳನೇ ದಿನವಾದ ಇಂದು ರಾಯ್‌ಪುರದಲ್ಲಿ ಬಿಲ್ಲುಗಾರಿಕೆ ಮತ್ತು ಫುಟ್‌ಬಾಲ್ ಪಂದ್ಯಗಳು ಹಾಗೂ ಸುರ್ಗುಜಾದಲ್ಲಿ ಕುಸ್ತಿ ಪಂದ್ಯಗಳು ನಡೆಯುತ್ತಿವೆ. ಫುಟ್‌ಬಾಲ್‌ನಲ್ಲಿ, ಮಹಿಳಾ ವಿಭಾಗದ ಎರಡೂ ಸೆಮಿಫೈನಲ್ ಪಂದ್ಯಗಳು ಇಂದು ನಡೆಯಲಿವೆ. ಮಹಿಳಾ ಹಾಕಿಯಲ್ಲಿ, ಮಿಜೋರಾಂ ಮತ್ತು ಒಡಿಶಾ ಫೈನಲ್ ಪ್ರವೇಶಿಸಿವೆ. ಪುರುಷರ ವಿಭಾಗದ ಹಾಕಿಯಲ್ಲಿ ಜಾರ್ಖಂಡ್ ಮತ್ತು ಒಡಿಶಾ ತಂಡಗಳ ನಡುವೆ ಫೈನಲ್ ಪಂದ್ಯಗಳು ನಡೆಯಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ  ><><<>**